**Akashvani : Bangalore**
**National Bulletin In Kannada**
**29.01.2025 / 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ಇಸ್ರೋದಿಂದ ೧೦೦ನೇ ಉಪಗ್ರಹ ಎನ್‌ವಿಎಸ್-೨ ಇಂದು ಯಶಸ್ವಿ ಉಡಾವಣೆ; ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾದ ಗಣ್ಯರು

೨. ಮೌನಿ ಅಮವಾಸ್ಯೆಯ ಪವಿತ್ರ ಸ್ನಾನಕ್ಕೆ ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನ ಮಹಾಕುಂಭಮೇಳದಲ್ಲಿ ವ್ಯಾಪಕ ಸಿದ್ಧತೆ

೩. ಬೆಂಬಲ ಬೆಲೆ ಯೋಜನೆಯಡಿ ಕೂಡಲೇ ಕಡಲೆಕಾಳು ಖರೀದಿಗೆ ರಾಜ್ಯ ಸರ್ಕಾರ ಮುಂದಾಗಬೇಕು- ಸಚಿವ ಪ್ರಲ್ಹಾದ್ ಜೋಶಿ

೪. ಡೆಹ್ರಾಡೂನ್‌ನಲ್ಲಿ ೩೮ನೇ ರಾಷ್ಟ್ರೀಯ ಕ್ರೀಡಾಕೂಟಕ್ಕೆ ಪ್ರಧಾನಿ ಚಾಲನೆ; ಖೋ ಖೋ ಪಂದ್ಯದಲ್ಲಿ ಇಂದು ಕರ್ನಾಟಕ - ಉತ್ತರಾಖಂಡ ಮುಖಾಮುಖಿ

**<><*<><>*><>**

ಆಂಧ್ರ ಪ್ರದೇಶದ ಶ್ರೀಹರಿಕೋಟಾದ ಸತೀಶ್‌ಧವನ್ ಬಾಹ್ಯಾಕಾಶ ಕೇಂದ್ರದಿಂದ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋದಿಂದ ಚಾರಿತ್ರಿಕ ೧೦೦ನೇ ಉಪಗ್ರಹವನ್ನು ಇಂದು ಯಶಸ್ವಿಯಾಗಿ ಉಡಾವಣೆ ಮಾಡಲಾಗಿದೆ. ಜಿಯೋಸಿಂಕ್ರೋನಸ್ ಭೂಕೇಂದ್ರಿತ ಉಪಗ್ರಹ ಉಡ್ಡಯನ ವಾಹನ ರಾಕೆಟ್‌ನಲ್ಲಿ ಎನ್‌ವಿಎಸ್-೨ ದಿಕ್ಸೂಚಿ ಉಪಗ್ರಹವನ್ನು ಮುಂಜಾನೆ ೬ ಗಂಟೆ ೨೩ ನಿಮಿಷಕ್ಕೆ ಉಡಾವಣೆ ಮಾಡಲಾಯಿತು. ಈ ಐತಿಹಾಸಿಕ ಕ್ಷಣಕ್ಕೆ ಇಸ್ರೋ ವಿಜ್ಞಾನಿಗಳು ಹಾಗೂ ದೇಶದ ವಿಜ್ಞಾನ, ತಂತ್ರಜ್ಞಾನದ ಕ್ಷೇತ್ರದ ಹಲವರು ಸಾಕ್ಷಿಯಾದರು.

**<><*<><>*><>**

ಇಂದು ಮೌನಿ ಅಮವಾಸ್ಯೆ. ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳಕ್ಕೆ ಇಂದು ವಿಶೇಷವಾದ ದಿನ. ಕುಂಭಮೇಳದಲ್ಲಿ ಭಕ್ತಾದಿಗಳಿಗೆ ವ್ಯಾಪಕ ವ್ಯವಸ್ಥೆಯನ್ನು ಕೈಗೊಳ್ಳಲಾಗುತ್ತಿದೆ. ಗಂಗಾ, ಯಮುನಾ ಮತ್ತು ಸರಸ್ವತಿ ನದಿಗಳು ಸೇರುವ ತ್ರಿವೇಣಿ ಸಂಗಮಕ್ಕೆ ಹೆಚ್ಚಿನ ಸಂಖ್ಯೆಯ ಭಕ್ತರು ಪುಣ್ಯಸ್ನಾನಕ್ಕೆ ಆಗಮಿಸುವ ನಿರೀಕ್ಷೆ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಭಾರಿ ಏರ್ಪಾಡುಗಳನ್ನು ಕೈಗೊಂಡಿದೆ. ಯಾವುದೇ ರೀತಿಯ ತುರ್ತು ಸಂದರ್ಭಗಳನ್ನು ಎದುರಿಸಲು ವಿಶೇಷ ವ್ಯವಸ್ಥೆಗಳನ್ನು ಕೈಗೊಳ್ಳಲಾಗಿದೆ. ಇದೇ ಜನವರಿ ೧೩ರಿಂದ ಆರಂಭವಾಗಿರುವ ಕುಂಭಮೇಳದಲ್ಲಿ ಈವರೆಗೆ ೧೫ ಕೋಟಿಗೂ ಅಧಿಕ ಭಕ್ತಾದಿಗಳು ಪುಣ್ಯಸ್ನಾನ ಮಾಡಿದ್ದಾರೆ. ಕುಂಭಮೇಳ ಫೆಬ್ರುವರಿ ೨೬ರ ವರೆಗೆ ನಡೆಯಲಿದ್ದು, ಸುಮಾರು ೪೦ ಕೋಟಿಗೂ ಅಧಿಕ ಮಂದಿ ಮೇಳಕ್ಕೆ ಭೇಟಿ ನೀಡುವ ಸಾಧ್ಯತೆ ಇದೆ ಎಂದು ಅಂದಾಜಿಸಲಾಗಿದೆ. ªÀÄಇಂದು ಭಾಗವಹಿಸುವ ಹೆಚ್ಚಿನ ಸಂಖ್ಯೆಯ ಭಕ್ತರ ದಟ್ಟಣೆಯನ್ನು

ನಿರ್ವಹಿಸಲು ಭಾರತೀಯ ರೈಲ್ವೆಯು ಹೆಚ್ಚುವರಿ ರೈಲುಗಳ ಸಂಚಾರಕ್ಕೆ ವ್ಯವಸ್ಥೆ ಕಲ್ಪಿಸಿದೆ. ಈ ಕುರಿತು ಮಾಹಿತಿ ನೀಡಿದ ರೈಲ್ವೆ ಮಂಡಳಿಯ ಅಧ್ಯಕ್ಷ ಮತ್ತು ಸಿಇಒ ಸತೀಶ್ ಕುಮಾರ್, ಈಗಾಗಲೇ ಯೋಜಿಸಲಾದ ವಿಶೇಷ ರೈಲುಗಳ ಜೊತೆಗೆ ಹೆಚ್ಚುವರಿ ೬೦ ವಿಶೇಷ ರೈಲುಗಳನ್ನು ಓಡಿಸಲು ರೈಲ್ವೆ ನಿರ್ಧರಿಸಿದೆ. ಇದರೊಂದಿಗೆ ಮೌನಿ ಅಮಮಾಸ್ಯೆಯಂದು ಒಟ್ಟು ೧೯೦ ವಿಶೇಷ ರೈಲುಗಳು ಸಂಚರಿಸಲಿವೆ. ಅಲ್ಲದೆ, ಇದರ ಜೊತೆಗೆ ಎಂದಿನಂತೆ ೧೧೦ ನಿಯಮಿತ ರೈಲುಗಳು ಸಂಚರಿಸಲಿವೆ. ಪ್ರಯಾಗ್‌ರಾಜ್‌ನಿಂದ ಪ್ರತಿ ನಾಲ್ಕು ನಿಮಿಷಗಳಿಗೊಮ್ಮೆ ಪ್ರಯಾಣಿಕರಿಗೆ ರೈಲು ಲಭ್ಯವಿರಲಿವೆ ಎಂದು ತಿಳಿಸಿದ್ದಾರೆ.

<><*<><>*><>

ಸಂಸತ್ ಬಜೆಟ್ ಅಧಿವೇಶನ ನಾಡಿದ್ದು ಆರಂಭವಾಗಲಿದ್ದು, ಮೊದಲ ದಿನ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಭಯ ಸದನಗಳನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಬಜೆಟ್ ಅಧಿವೇಶನದ ಮೊದಲ ಭಾಗ ಈ ತಿಂಗಳ ೩೧ರಿಂದ ಫೆಬ್ರವರಿ ೧೩ರ ವರೆಗೆ ನಡೆಯಲಿದೆ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ೨೦೨೫ - ೨೬ನೇ ಸಾಲಿನ ಮುಂಗಡಪತ್ರವನ್ನು ಫೆಬ್ರವರಿ ೧ ರಂದು ಮಂಡಿಸಲಿದ್ದಾರೆ. ಈ ಬಾರಿಯ ಬಜೆಟ್ ನಲ್ಲಿ ದೇಶೀಯ ಮತ್ತು ಜಾಗತಿಕ ಸವಾಲುಗಳನ್ನು ಗಮನದಲ್ಲಿರಿಸಿಕೊಂಡು ಬಜೆಟ್ ಮಂಡನೆಯಾಗುವ ಸಾಧ್ಯತೆಗಳಿವೆ. ಮೂಲಭೂತ ಸೌಕರ್ಯಗಳು, ಉತ್ಪಾದನಾ ವಲಯ, ಉದ್ಯೋಗ ಸೃಷ್ಟಿ, ಕೃಷಿ ಕ್ಷೇತ್ರದ ಬೆಳವಣಿಗೆ ಹಾಗೂ ತಂತ್ರಜ್ಞಾನ ಬೆಳವಣಿಗೆಗೆ ಒತ್ತು ನೀಡುವ ಸಾಧ್ಯತೆಗಳಿವೆ ಎಂದು ತಜ್ಞರು ವಿಶ್ಲೇಷಿಸುತ್ತಿದ್ದಾರೆ. ಎರಡನೇ ಭಾಗದ ಅಧಿವೇಶನ ಮಾರ್ಚ್ ೧೦ರಿಂದ ಏಪ್ರಿಲ್ ೪ರ ವರೆಗೆ ನಡೆಯಲಿದೆ.

<><*<><>*><>

ಸವಾಲುಗಳು ಮತ್ತು ಅವಕಾಶಗಳಲ್ಲಿ ಜಾಗತಿಕ ವ್ಯವಸ್ಥೆ ಮಹತ್ವದ ಬದಲಾವಣೆಯಾಗಲಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ಅವರು ಅಬುದಾಬಿಯ ಭಾರತೀಯ ರಾಯಭಾರ ಕಚೇರಿಯಲ್ಲಿ ನಿನ್ನೆ ಗಣರಾಜ್ಯೋತ್ಸವ ಸಮಾರಂಭ ಉದ್ದೇಶಿಸಿ ಮಾತನಾಡಿ, ಭಾರತ-ಯುಎಇ ನಡುವಿನ ಸಂಬಂಧ ಉತ್ತಮ ರೀತಿಯಲ್ಲಿ ಸಾಗಿದ್ದು, ಅದು ದಿನೇ ದಿನೇ ಬಲವರ್ಧನೆಗೊಳ್ಳುತ್ತಿದೆ ಎಂದು ಹೇಳಿದರು. ಉಭಯ ರಾಷ್ಟ್ರಗಳ ನಡುವೆ ಪರಸ್ಪರ ವಿಶ್ವಾಸ ಹಾಗೂ ಗೌರವವಿದೆ. ಜಾಗತಿಕ ಸನ್ನಿವೇಶದ ಹಿನ್ನೆಲೆಯಲ್ಲಿ ಎರಡೂ ರಾಷ್ಟ್ರಗಳ ಸಂಬಂಧಕ್ಕೆ ಹೆಚ್ಚಿನ ಮಹತ್ವವಿದೆ. ಅಂತಾರಾಷ್ಟ್ರೀಯ ವೇದಿಕೆಗಳಲ್ಲಿ ಉಭಯ ರಾಷ್ಟ್ರಗಳ ನಡುವಿನ ಸಹಭಾಗಿತ್ವ ಮುಂದುವರಿಯಲಿದೆ ಎಂದು ಅವರು ಹೇಳಿದರು.

**ಧ್ವನಿ: ಡಾ.ಎಸ್.ಜೈಶಂಕರ್ ( ೨೯ ಸೆಕೆಂಡ್ )**

<><*<><>*><>

ಕರ್ನಾಟಕ ಸರ್ಕಾರದ ಪ್ರಸ್ತಾವದಂತೆ, ಕರ್ನಾಟಕದಲ್ಲಿ ೨೦೨೪-೨೫ರ ಹಿಂಗಾರು ಋತುವಿನಲ್ಲಿ ಬೆಳೆದ ಕಡಲೆಯನ್ನು ಬೆಂಬಲ ಬೆಲೆ ಯೋಜನೆಯಡಿ ಖರೀದಿಗೆ ಭಾರತ ಸರ್ಕಾರದ ಕೃಷಿ ಸಚಿವಾಲಯ ಅನುಮತಿ ನೀಡಿದೆ ಎಂದು ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಮಾಹಿತಿ ನೀಡಿರುವ ಅವರು, ಮುಕ್ತ ಮಾರುಕಟ್ಟೆಯಲ್ಲಿ ಈ ಬೆಳೆಗಳಿಗೆ ಬೆಲೆ ಕಡಿಮೆ ಇರುವುದರಿಂದ ಕನಿಷ್ಠ ಬೆಂಬಲ ಬೆಲೆಯಡಿ ಖರೀದಿಸಿ,

ರೈತರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದಲೇ ಕೇಂದ್ರಸರ್ಕಾರ ಈ ಕ್ರಮಕೈಗೊಂಡಿದೆ. ರಾಜ್ಯ ಸರ್ಕಾರ ತನ್ನ ಪ್ರಸ್ತಾವದಲ್ಲಿ ನಮೂದಿಸಿದಂತೆ ೯೬ ಸಾವಿರದ ೪೯೮ ಮೆಟ್ರಿಕ್ ಟನ್ ಗುಣಮಟ್ಟದ ಕಡಲೆಕಾಳನ್ನು ಖರೀದಿಗೆ ಕೇಂದ್ರಸರ್ಕಾರ ಅನುಮೋದನೆ ನೀಡಿದೆ. ಈಗ ಜಿಲ್ಲಾವಾರು ೯೦ ದಿನದೊಳಗಾಗಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಿ, ರೈತರಿಂದ ಖರೀದಿಸಿ, ಹಣ ತಲುಪುವಂತೆ ಮಾಡುವುದು ರಾಜ್ಯ ಸರ್ಕಾರದ ಜವಾಬ್ದಾರಿ ಆಗಿದೆ. ಈ ಕೂಡಲೇ ಈ ನಿಟ್ಟಿನಲ್ಲಿ ಅವರು ಕಾರ್ಯಪ್ರವತ್ತರಾಗಬೇಕಾಗಿದೆ. ರಾಜ್ಯ ಸರ್ಕಾರವು ತಕ್ಷಣವೇ ರಾಜ್ಯಾದ್ಯಂತ ಖರೀದಿ ಕೇಂದ್ರಗಳನ್ನು ಆರಂಭಿಸಿ ಖರೀದಿ ಪ್ರಕ್ರಿಯೆಗೆ ಚಾಲನೆ ನೀಡಬೇಕೆಂದು ಸಚಿವರು ಕೋರಿದ್ದಾರೆ.

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ನಿನ್ನೆ ೩೮ನೇ ರಾಷ್ಟ್ರೀಯ ಕ್ರೀಡಾಕೂಟವನ್ನು ಉದ್ಘಾಟಿಸಿದರು. ಕ್ರೀಡಾಪಟುಗಳು ಮೆರವಣಿಗೆಯಲ್ಲಿ ಭಾಗವಹಿಸಿ, ಏಕತೆ ಮತ್ತು ಕ್ರೀಡಾ ಮನೋಭಾವವನ್ನು ಪ್ರದರ್ಶಿಸಿದರು. ರಾಷ್ಟ್ರೀಯ ಕ್ರೀಡಾಕೂಟದ ಜ್ಯೋತಿಯನ್ನು ಒಲಿಂಪಿಯನ್ ಲಕ್ಷ್ಯ ಸೇನ್, ಪ್ರಧಾನಿ ಮೋದಿ ಅವರಿಗೆ ಹಸ್ತಾಂತರಿಸಿದರು. ಬಳಿಕ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರೀಯ ಕ್ರೀಡಾಕೂಟ ಏಕ್ ಭಾರತ್, ಶ್ರೇಷ್ಠ ಭಾರತ್ ಪರಿಕಲ್ಪನೆಯ ಸಹಕಾರಕ್ಕೆ ವೇದಿಕೆ ಕಲ್ಪಿಸುತ್ತದೆ ಎಂದು ಹೇಳಿದರು. ಭಾರತೀಯ ವೈವಿದ್ಯತೆಯನ್ನು ಸಂಭ್ರಮಿಸುವುದರ ಜೊತೆಗೆ ಪ್ಲಾಸ್ಟಿಕ್ ಮುಕ್ತ ಉತ್ತರಾಖಂಡಕ್ಕಾಗಿ ಕೊಡುಗೆ ನೀಡುವಂತೆ ಕ್ರೀಡಾಪಟುಗಳಿಗೆ ಕರೆ ನೀಡಿದರು. ೩೮ನೇ ರಾಷ್ಟ್ರೀಯ ಕ್ರೀಡಾಕೂಟದ ಎರಡನೇ ದಿನವಾದ ಇಂದು ನಡೆಯುವ ಪುರುಷರ ಖೋ ಖೋ ಪಂದ್ಯದಲ್ಲಿ ಮಹಾರಾಷ್ಟ್ರ ಮತ್ತು ಕೇರಳ ತಂಡಗಳು ಸೆಣಸಲಿವೆ. ಪಂದ್ಯ ಬೆಳಗ್ಗೆ ೯ ಗಂಟೆಗೆ ಆರಂಭವಾಗಲಿದೆ. ಬೆಳಗ್ಗೆ ೧೦ ಗಂಟೆಗೆ ನಡೆಯಲಿರುವ ಮತ್ತೊಂದು ಪಂದ್ಯದಲ್ಲಿ ಒಡಿಶಾ ಮತ್ತು ವೆಸ್ಟ್‌ಬೆಂಗಾಲ್ ತಂಡಗಳು ಮುಖಾಮುಖಿಯಾಗಲಿವೆ. ಸಂಜೆ ೪ ಗಂಟೆಗೆ ನಡೆಯಲಿರುವ ಮಹಿಳಾ ಖೋ ಖೋ ಪಂದ್ಯದಲ್ಲಿ ಕರ್ನಾಟಕ ಹಾಗೂ ಉತ್ತರಾಖಂಡ ತಂಡಗಳು ಮುಖಾಮುಖಿಯಾಗಲಿವೆ. ಬಳಿಕ ನಡೆಯಲಿರುವ ಪುರುಷರ ವಿಭಾಗದ ಪಂದ್ಯದಲ್ಲಿ ಕರ್ನಾಟಕ ಮತ್ತು ಉತ್ತರಾಖಂಡ ತಂಡಗಳು ಮುಖಾಮುಖಿಯಾಗಲಿದ್ದು, ಈ ಪಂದ್ಯ ಸಂಜೆ ೬ ಗಂಟೆಗೆ ಆರಂಭವಾಗಲಿದೆ.

**<><*<><>*><>**

ಯಮುನಾ ನದಿ ನೀರಿಗೆ ಸಂಬಂಧಿಸಿದಂತೆ ವಿವಾದಾತ್ಮಕ ಹೇಳಿಕೆ ನೀಡಿದ್ದ ಆಮ್ ಆದ್ಮಿ ಪಕ್ಷದ ಸಂಚಾಲಕ ಅರವಿಂದ್ ಕೇಜ್ರಿವಾಲ್ ಅವರಿಗೆ ಕೇಂದ್ರ ಚುನಾವಣಾ ಆಯೋಗ ನೋಟಿಸ್ ಜಾರಿ ಮಾಡಿದೆ. ಯಮುನ ನದಿ ನೀರು, ವಿಷಯುಕ್ತವಾಗುತ್ತಿದೆ ಎಂದು ಸಂದರ್ಶನವೊಂದರಲ್ಲಿ ಅವರು ಟೀಕೆ ಮಾಡಿದ್ದರು. ಈ ಬಗ್ಗೆ ಕಾಂಗ್ರೆಸ್ ಹಾಗೂ ಬಿಜೆಪಿ ಕೇಂದ್ರ ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಿತ್ತು. ಇಂದು ರಾತ್ರಿ ೮ ಗಂಟೆ ಒಳಗಾಗಿ ತಮ್ಮ ಹೇಳಿಕೆಗೆ ಆಧಾರ ಸಮೇತ ಸ್ಪಷ್ಟೀಕರಣ ನೀಡುವಂತೆ ಆಯೋಗ ಅರವಿಂದ್ ಕೇಜ್ರಿವಾಲ್ ಅವರಿಗೆ ಸೂಚಿಸಿದೆ. ದೆಹಲಿ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಆರೋಪ ಪ್ರತ್ಯಾರೋಪ ತೀವ್ರಗೊಂಡಿದೆ.

**<><*<><>*><>**

ಹರಿಯಾಣದ ಕುರುಕ್ಷೇತ್ರ ಜಿಲ್ಲೆಯ ಪೆಹೋವಾ ಸರಸ್ವತಿ ತೀರ್ಥದಲ್ಲಿ ಇಂದು ಅಂತರರಾಷ್ಟ್ರೀಯ ಸರಸ್ವತಿ ಮಹೋತ್ಸವ ಆರಂಭವಾಗಲಿದೆ. ಮುಖ್ಯಮಂತ್ರಿ ನಯಾಬ್ ಸಿಂಗ್ ಸೈನಿ ಉತ್ಸವವನ್ನು

ಉದ್ಘಾಟಿಸಲಿದ್ದಾರೆ.   ೭ ದಿನಗಳ ಈ ಉತ್ಸವದಲ್ಲಿ, ಫೆಬ್ರವರಿ ೨ ರವರೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ಫೆಬ್ರವರಿ ೪ ರವರೆಗೆ ತೀರ್ಥಯಾತ್ರೆಯ ಸ್ಥಳದಲ್ಲಿ ಸರಸ್ ಮೇಳವನ್ನು ಸಹ ಆಯೋಜಿಸಲಾಗುವುದು. ಈ ವರ್ಷ, ಆದಿ ಬದ್ರಿಯಿಂದ ರನ್ ಆಫ್ ಕಚ್‌ವರೆಗಿನ ಸರಸ್ವತಿ ನದಿಯ ಮಾರ್ಗದಲ್ಲಿರುವ ಎಲ್ಲಾ ಐತಿಹಾಸಿಕ ತೀರ್ಥಯಾತ್ರೆಗಳಲ್ಲಿ ಮಂಡಳಿಯು ಕಾರ್ಯಕ್ರಮಗಳನ್ನು ಆಯೋಜಿಸಲಿದೆ ಎಂದು ಹರಿಯಾಣ ಸರಸ್ವತಿ ಪರಂಪರೆ ಅಭಿವೃದ್ಧಿ ಮಂಡಳಿಯ ಉಪಾಧ್ಯಕ್ಷ ಧುಮನ್ ಸಿಂಗ್ ಹೇಳಿದ್ದಾರೆ.

**<><*<><>*><>**

ಭಾರತ ಕ್ರಿಕೆಟ್ ತಂಡದ ವೇಗಿ ಜಸ್ಪ್ರೀತ್ ಬುಮ್ರಾ ಅವರು, ಎಲ್ಲಾ ಮಾದರಿ ಕ್ರಿಕೆಟ್‌ನಲ್ಲಿ ನೀಡಿದ ಅಸಾಧಾರಣ ಪ್ರದರ್ಶನಕ್ಕಾಗಿ ೨೦೨೪ ರ ಐಸಿಸಿ ಪುರುಷರ ಕ್ರಿಕೆಟಿಗನಿಗೆ ನೀಡುವ ಪ್ರತಿಷ್ಠಿತ ಸರ್ ಗಾರ್ಫೀಲ್ಡ್ ಸೋಬರ್ಸ್ ಪ್ರಶಸ್ತಿಗೆ ಭಾಜನರಾಗಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**